ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ಅಮಾನತ್ತುಗೊಳಿಸಲಾಗಿರುವವರನ್ನು ಕೆಲಸಕ್ಕೆ ತೆಗೆದುಕೊಳ್ಳದಿರುವುದರ ಬಗ್ಗೆ

೧೨೧೦. ಶ್ರೀ ರಾಮಲಿಂಗ ರೆಡ್ಡಿ (ಜಯನಗರ).—ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ :—

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದವರು ಅಮಾನತ್ತುಗೊಂಡ ನೌಕರನ್ನು ಆರು ತಿಂಗಳೊಳಗಾಗಿ ಕೆಲಸಕ್ಕೆ ಮರು ನೇಮಕ ಮಾಡಬೇಕೆಂಬ ಸರ್ಕಾರದ ನಿಯಮಗಳನ್ನು ಕಡೆಗಣಿಸಿರುವರೇ?

(ಆ) ಹಾಗಿದ್ದಲ್ಲಿ ಅದಕ್ಕೆ ಕಾರಣಗಳೇನು ?

ಶ್ರೀ ವೀರೇಂದ್ರ ಪಾಟೀಲ್ (ಮುಖ್ಯ ಮಂತ್ರಿಗಳು) .—

(ಅ) ಇಲ್ಲ

(ಆ) ಉದ್ಭವಿಸುವುದಿಲ್ಲ.

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿರುವ ಖಾಲಿ ಹುದ್ದೆಗಳು

೧೨೧೧. ಶ್ರೀ ರಾಮಲಿಂಗ ರೆಡ್ಡಿ (ಜಯನಗರ) .—ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ :—

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿಮಾಡಲು ಏನು ಕ್ರಮಗಳನ್ನು ಕೈಗೊಳ್ಳಲಾಗಿದೆ ?

(ಆ) ಈ ಹುದ್ದೆಗಳನ್ನು ಪ್ರಾಧಿಕಾರದ ನೌಕರರಿಗೆ ನೀಡಲು ಅವರಿಗಿರುವ ಭಾದಕಗಳೇನು ?

(ಇ) ಎಷ್ಟು ಸಮಯದೊಳಗೆ ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ?

ಶ್ರೀ ವೀರೇಂದ್ರ ಪಾಟೀಲ್ (ಮುಖ್ಯ ಮಂತ್ರಿಗಳು) .—

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ೨೦ ವಾಹನ ಚಾಲಕರ (ಡ್ರೈವರ್ಸ್) ಹುದ್ದೆಗಳು ಮಾತ್ರ ಖಾಲಿ ಇದ್ದು ಅವುಗಳನ್ನು ತುಂಬುವ ಸಲುವಾಗಿ ಉದ್ಯೋಗ ವಿನಿಮಯ ಕೇಂದ್ರದಿಂದ ಪಟ್ಟಿ ಪಡೆದು ಪುನ್ತು ಅರ್ಜಿಗಳನ್ನು ಸಹ ಕರೆದು ಭರ್ತಿ ಮಾಡಲು ನಿರ್ಣಯ ಕೈಗೊಳ್ಳಲಾಗಿದೆ.

(ಆ) ರೋಸ್ಟರ್ ಪದ್ಧತಿ ಮತ್ತು ಅರ್ಜಿಗಳನ್ನು ಕರೆದು ಅಥವಾ ಉದ್ಯೋಗ ವಿನಿಮಯ ಕೇಂದ್ರದಿಂದ ಪಟ್ಟಿ ಪಡೆದು ಈ ಹುದ್ದೆಗಳನ್ನು ಭರ್ತಿ ಮಾಡಬೇಕಾಗುವುದು ಪ್ರಾಧಿಕಾರದ ಅರ್ಹತೆಯುಳ್ಳ ಯಾರೇ ತಾತ್ಕಾಲಿಕ ನೌಕರರು ಈ ಹುದ್ದೆಗೆ ಅರ್ಜಿಗಳನ್ನು ಹಾಕಿಕೊಳ್ಳಬಹುದು.

(ಇ) ಆವಶ್ಯಕ ಕಂಡು ಬಂದಾಗಲೆಲ್ಲ ಖಾಲಿ ಬಿದ್ದ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.

ರಾಜ್ಯದಲ್ಲಿನ ಕನ್ನಡಿಗರಿಗೆ ಉದ್ಯೋಗ ಒದಗಿಸುವ ಬಗ್ಗೆ

೧೨೨೨. ಶ್ರೀ ವಾಟಾಳ್ ನಾಗರಾಜ್ (ಚಾಮರಾಜ ನಗರ) .—ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ :—

(ಅ) ರಾಜ್ಯದಲ್ಲಿರುವ ಕನ್ನಡಿಗರಿಗೆ ಉದ್ಯೋಗ ಒದಗಿಸುವ ನೀತಿಯನ್ನು ರೂಪಿಸಿರುವುದೆ ?

(ಆ) ಈ ಸಂಬಂಧ ನೇಮಿಸಿದ ಡಾ. ಸರೋಜಿನಿ ಮಹಿಷಿಯವರ ವರದಿಯನ್ನು ಸರ್ಕಾರವು ಅಂಗೀಕರಿಸಿ ಕಾರ್ಯಗತ ಗೊಳಿಸುವುದೆ ?

(ಇ) ಇಲ್ಲದಿದ್ದಲ್ಲಿ ಅದಕ್ಕೆ ಕಾರಣಗಳೇನು ?

ಶ್ರೀ ವೀರೇಂದ್ರ ಪಾಟೀಲ್ (ಮುಖ್ಯ ಮಂತ್ರಿಗಳು) –

(ಅ) ಈ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

(ಆ) ಈ ವರದಿಯು ಸರ್ಕಾರದ ಪರಿಶೀಲನೆಯಲ್ಲಿದೆ.

(ಇ) –ಡಿಟೋ–